ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು

ಕೃಷಿ ಹವಾಮಾನ ವಿಭಾಗ, ಜಿ.ಕೆ.ವಿ.ಕೆ, ಬೆಂಗಳೂರು–65

ನಾಯನಹಳ್ಳಿಯ ಕೃಷಿ ಹವಾಮಾನ ಮುನ್ಸೂಚನೆ

ದಿನಾಂಕ: 1.04.16

ಈ ವಾರದ ಮುನ್ಸೂಚನೆ (2.04.16 to 6.04.16 ವರೆಗೆ)

ನಿಯತಾಂಕಗಳು	2.04.16	3.04.16	4.04.16	5.04.16	6.04.16
ಮಳೆ (ಮಿ ಮಿ)	0	0	0	0	1
ಗರಿಷ್ಠ ಉಷ್ಣಾಂಶ(ಡಿ.ಸೆ.)	35	35	38	38	38
ಕನಿಷ್ಠ ಉಷ್ಣಾಂಶ (ಡಿ.ಸೆ.)	19	20	21	22	22
ಮೋಡ (ಪ್ರಮಾಣ)	3	2	1	1	4
ಅರ್ದ್ರತೆ ೭.೨೦ ಬೆ (ಶೇ)	94	94	51	71	58
ಅರ್ದ್ರತೆ ೨.೨೦ ಮ (ಶೇ)	23	18	15	16	20
ಗಾಳಿಯ ವೇಗ (ಕಿ.ಮಿ/ಗಂಟೆಗೆ)	17	13	12	11	6
ಗಾಳಿಯ ದಿಕ್ಕು (ಡಿಗ್ರಿ)	189	145	189	238	250

ಭಾರತೀಯ ಹವಾಮಾನ ಇಲಾಖೆಯ ಮುನ್ಸೂಚನೆಯ ಪ್ರಕಾರ **ನಾಯನಹಳ್ಳಿ** ಹಾಗೂ ಸುತ್ತಮುತ್ತ ಮುಂದಿನ ಐದು ದಿನಗಳು ಒಣ ಹವೆ ಮುಂದುವರೆಯಲಿದೆ. ದಿನದ ಗರಿಷ್ಠ ಉಷ್ಣಾಂಶವು 35-38°C ಮತ್ತು ಕನಿಷ್ಠ 19-22°C ಇರಲಿದೆ. ಬೆಳಗಿನ ಆರ್ದ್ರತೆ ಪ್ರಮಾಣ ಶೇ 51-94 % ಇದ್ದು, ಮಧ್ಯಾಹ್ನ 15-23 % ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ 6-17 ಕಿ.ಮೀ. ವೇಗದಲ್ಲಿ ಬೀಸುವ ಸಂಭವವಿದೆ.

ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ

- ✓ **ಬರುವ ದಿನಗಳಲ್ಲಿ ಬಿಸಿಲಿನ ತಾಪ ಹೆಚ್ಚಾಗುವುದು,** ತರಕಾರಿ ಹಾಗೂ ಇತರೆ ಬೆಳೆಗಳಿಗೆ ಸರಿಯಾದ ಪ್ರಮಾಣದಲ್ಲಿ ನೀರು ಒದಗಿಸಬೇಕು.
- ✓ ಕೋಳಿ ಸಾಕಣೆ,ಜಾನುವಾರು, ರೇಷ್ಮೆ ಕೃಷಿ ಬಿಸಿಲಿನ ತಾಪದಿಂದ ರಕ್ಷಿಸಲು ಸೂಕ್ತ ವ್ಯವಸ್ಥೆ ಕೊಡಬೇಕು.
- ✓ ಜಾನುವಾರು: ಬಿಸಿಲು ಹೆಚ್ಚಾಗಿರುವುದರಿಂದ ಹಸಿರು ಹುಲ್ಲಿನ ಅಭಾವ ಕಂಡುಬರುತ್ತದೆ ಆದುದರಿಂದ ಹಗೇವಿನಲ್ಲಿ ರಸ ಮೇವನ್ನು ತಯಾರಿಸಿ ದನಕರುಗಳಿಗೆ ಕೊಡಿ ಹಾಗೂ ಕುಡಿಯಲು ಸ್ವಚ್ಚವಾದ ನೀರನ್ನು ಒದಗಿಸಿ.
- ✓ ಜಾನುವಾರು: ಕೊಟ್ಟಿಗೆಯನ್ನು ಶುಚಿಯಾಗಿ ಇಟ್ಟುಕೊಳ್ಳುವುದು ಮತ್ತು ಜಾನುವಾರುಗಳನ್ನು ಬಿಸಿಲಿನಿಂದ ರಕ್ಷಿಸಬೇಕು.
- ✓ ಉಷ್ಣಾಂಶವು ಹೆಚ್ಚಾಗುತ್ತಿರುವುದರಿಂದ ದನಕರುಗಳನ್ನು ಬೆಳಿಗ್ಗೆ ಮತ್ತು ಸಂಜೆಯ ಹೊತ್ತಿನಲ್ಲಿ ಮೇಯಿಸಲು ಹೊರಗೆ ಬಿಡಿ.
- ✓ ಜಾನುವಾರುಗಳಿಗೆ ತೆಲಾರಿಯಾ ಲಸಿಕೆಯನ್ನು ಮಾರ್ಚ್ ತಿಂಗಳಿನ ಒಳಗೆ ಹಾಕಿಸಿ.
- ✓ ಲಸಿಕೆಯನ್ನು ಹಾಕಿಸುವುದಕ್ಕೆ ಮುನ್ನ ಜಂತುನಾಶಕವನ್ನು ಕುಡಿಸಿ.

ಸಸ್ಯ ಸಂರಕ್ಷಣೆ:

- ✓ **ರಸ ಹೀರುವ ಕೀಟಗಳು:** ಇವುಗಳ ಹತೋಟಿಗೆ ಶೇ. ೪ರಷ್ಟು ಬೇವಿನ ಕಷಾಯವನ್ನು ಸಿಂಪಡಿಸಬೇಕು ಅಥವಾ ಬೇವಿನ ಎಣ್ಣೆಯನ್ನು ಸಿಂಪಡಿಸಬೇಕು ಅಥವಾ ಇಮಿಡಕ್ಲೋಪ್ರಿಡ್ (0.5 ml/L) ಸಿಂಪಡಿಸಿ. ಅಂಟು ದ್ರಾವಣವನ್ನು ಲೇಪಿಸಿದ ಹಳದಿ ಬಣ್ಣದ ಅಂಟು ಬಲೆಗಳನ್ನು ಅಲ್ಲಲ್ಲಿ ಇಡುವುದರಿಂದ ಬಿಳಿನೊಣ, ರೆಕ್ಕೆ ಇರುವ ಏಫಿಡ್ಸ್ ಹಾಗೂ ಇನ್ನಿತರೆ ಕೀಟಗಳು ಆಕರ್ಷಣೆಗೊಂಡು ಆ ಬಲೆಗೆ ಅಂಟಿಕೊಳ್ಳುತ್ತವೆ.
- ✓ ರಸ ಹೀರುವ ಕೀಟಗಳು ಕಂಡುಬಂದರೆ ಆಕ್ಟ್ರ (೧.೦ ಗ್ರಾಂ ಪ್ರತಿ ಲೀ ಗೆ) ಅಥವಾ ಲ್ಯಾನ್ಸರ್ ಗೋಲ್ಡ್ ಸಿಂಪಡಿಸಿ.

ನೋಡಲ್ ಅಧಿಕಾರಿ:

ಕೃಷಿ ಹವಾಮಾನ ವಿಭಾಗ

ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು